ದಿನಾಂಕಃ 10-06-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ಮಾಡಿಸಲಾಯಿತು.

ಪಾಟೀ ಸವಾಲು – ಶ್ರೀ. ಕೆ.ಎಸ್.ಎ.ಆರ್ ವಕೀಲರಿಂದ 2 ನೇ ಪ್ರತಿವಾದಿ ಪರ

ನನ್ನ ಮತ್ತು 1 ನೇ ಪ್ರತಿವಾದಿ ನಡುವೆ ಆಗಿದೆ ಎಂದು ಹೇಳುವ ಕ್ರಯ ಕರಾರಿನ ಸಮಯದಲ್ಲಿ 2 ನೇ ಪ್ರತಿವಾದಿ ಹಾಜರು ಇರಲಿಲ್ಲ. ಕ್ರಯ ಕರಾರು ನೋಂದಣಿಯಾಗಿರಲಿಲ್ಲ. ಆಗಿದೆ ಎಂದು ಹೇಳುವ ಕ್ರಯ ಕರಾರಿನ ನಂತರ ದಾವಾ ಆಸ್ತಿಯ ಫಾರಂ ನಂ 3 ಅಥವಾ ಹಕ್ಕು ರುಣಭಾರದಲ್ಲಿ ಯಾವುದೇ ರೀತಿಯಲ್ಲಿ ನಮೂದಿಸುವಂತೆ ಕಂದಾಯ ಇಲಾಖೆ ಮೂಲಕ ನಾನು ಯಾವುದೇ ಕ್ರಮ ಕೈಗೊಂಡಿರಲಿಲ್ಲ. 2 ನೇ ಪ್ರತಿವಾದಿಗೆ 1 ನೇ ಪ್ರತಿವಾದಿ ದಾವಾ ಆಸ್ತಿಯನ್ನು ಮಾರಾಟ ಮಾಡಿದ ನಂತರ ನಾನು 1 ನೇ ಪ್ರತಿವಾದಿಗೆ ವಕೀಲರ ಮೂಲಕ ನೋಟೀಸು ನೀಡಿರುತ್ತೇನೆಂದರೆ ಸಾಕ್ಷಿಯು ನನಗೆ ಮಾರಾಟ ಮಾಡಿರುವ ಬಗ್ಗೆ ಆ ಸಮಯದಲ್ಲಿ ತಿಳಿದಿರಲಿಲ್ಲ ಎಂದು ಹೇಳುತ್ತಾರೆ. ಈ ದಾವೆಯನ್ನು 2 ನೇ ಪ್ರತಿವಾದಿಗೆ 1 ನೇ ಪ್ರತಿವಾದಿ ದಾವಾ ಆಸ್ತಿಯನ್ನು ಮಾರಾಟ ಮಾಡಿದ ನಂತರ ಸಲ್ಲಿಸಲಾಗಿರುತ್ತದೆ ಎಂದರೆ ಸಾಕ್ಷಿಯು ನಮಗೆ 1 ನೇ ಪ್ರತಿವಾದಿ ಕ್ರಯ ಪತ್ರ ಮಾಡಿಕೊಡದ ಕಾರಣ ಈ ದಾವೆಯನ್ನು ಸಲ್ಲಿಸಿರುತ್ತೇನೆಂದು ಹೇಳುತ್ತಾರೆ.

ನನ್ನ ಮತ್ತು 1 ನೇ ಪ್ರತಿವಾದಿಯ ನಡುವೆ ಆಗಿರುತ್ತದೆ ಎಂದು ಹೇಳುವ ಕ್ರಯ ಕರಾರಿನ ಬಗ್ಗೆ 2 ನೇ ಪ್ರತಿವಾದಿಗೆ ಕ್ರಯಪತ್ರ ಮಾಡಿ ಕೊಳ್ಳುವ ಸಮಯದಲ್ಲಿ ಯಾವುದೇ ಮಾಹಿತಿ ಇರಲಿಲ್ಲ ಎಂದರೆ ನನಗೆ ಗೊತ್ತಿರುವುದಿಲ್ಲ. 2 ನೇ ಪ್ರತಿವಾದಿಗೆ ಆಗಿದೆ ಎನ್ನುವ ಕ್ರಯ ಕರಾರಿನ ಬಗ್ಗೆ ಯಾವುದೇ ಮಾಹಿತಿ ಇಲ್ಲದ ಕಾರಣ ಆತ Bonafide Purchaser ಆಗಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. 2 ನೇ ಪ್ರತಿವಾದಿಯು 1 ನೇಪ್ರತಿವಾದಿಯಿಂದ ಮಾರುಕಟ್ಟೆ ಮೌಲ್ಯಕ್ಕೆ ಸಮನಾಗಿ ಪ್ರತಿಫಲ ಪಾವತಿಸಿ ಕಾನೂನು ಬದ್ಧ ಕ್ರಯ ಪತ್ರ ಪಡೆದುಕೊಂಡು ದಾವಾ ಆಸ್ತಿಯ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ನಾನು ದಾವಾ ಆಸ್ತಿಯಲ್ಲಿ ಕೇಳಿದ ಪರಿಹಾರವನ್ನು ಪಡೆಯಲು ಅರ್ಹನಾಗಿರುವುದಿಲ್ಲ ಎಂದರೆ ಸರಿಯಲ್ಲ.ಠ

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

ಪ್ರಧಾನ  ಹಿರಿಯ ವ್ಯವಹಾರ  ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ ದಂಡಾಧಿಕಾರಿಗಳು, ಸಾಗರ